ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ : ಸಹನಿಶಾಶಿ.ಆಶಾ/ಕ.ವೈ.ಕು:ಜಾ:ಸು/32544./ಇ.ವಿ:2020 ದಿನಾಂಕ : 09.03.2020

-: ಸುತ್ತೋಲೆ :-

ವಿಷಯ : **Novel Coronavirus (COVID-19)** ನ ವೈರಸ್ ಸೋಂಕು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಅಗತ್ಯ ಪೂರ್ವಸಿದ್ಧತಾ ಕ್ರಮಗಳ ಕುರಿತು.

ಉಲ್ಲೇಖ : 1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಕರ್ನಾಟಕ ಸರ್ಕಾರ ಇವರ ಸಲಹೆ ಪತ್ರ ಸಂಖ್ಯೆ : **DD/SSU/Novel Coronavirus/17/2019-20,** ದಿನಾಂಕ : 18.02.2020.

2) ಜಂಟಿ ಕಾರ್ಯದರ್ಶಿಗಳು, ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ನವದೆಹಲಿ, ಇವರ ಪತ್ರ ಸಂಖ್ಯೆ : **14-6/2020-IS-10,** ದಿನಾಂಕ : 21.02.2020.

3) ಈ ಕಚೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 27.02.2020

4) ದಿನಾಂಕ 09.03.2020 ರಂದು ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉನ್ನತಾಧಿಕಾರಿಗಳ ಸಭೆ.

- - -

Novel Coronavirus (COVID-19) ವಿವಿಧ ದೇಶಗಳಲ್ಲಿ ವ್ಯಾಪಕವಾಗಿ ಹರಡುತ್ತಿರುವ ಪ್ರಯುಕ್ತ ವಿಶ್ವ ಆರೋಗ್ಯ ಸಂಸ್ಥೆ (World Health Organisation)ಯು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾರ್ವಜನಿಕರ ಆರೋಗ್ಯದ ಕಾಳಜಿ ಕುರಿತು ತುರ್ತು ಪರಿಸ್ಥಿತಿಯನ್ನು (Public Health Emergency of International Concern (PHEIC) ಘೋಷಿಸಿದೆ. ಪ್ರಸ್ತುತ ಈ ವೈರಾಣು ವಿಶ್ವದ ಬಹುತೇಕ ರಾಷ್ಟ್ರಗಳಲ್ಲಿ ವ್ಯಾಪಕವಾಗಿ ಹರಡುತ್ತಿರುವುದು ವರದಿಯಾಗುತ್ತಿದೆ. ಜೊತೆಗೆ ಈ ವೈರಾಣು ಹರಡುವ ವೇಗ ಮತ್ತು ವಿಧಾನ, ವಿಷಯದ ಗಂಭೀರತೆಯನ್ನು ಹೆಚ್ಚಿಸಿದೆ.

ಈ ರೋಗಾಣು ಶಾಲಾ ವಿದ್ಯಾರ್ಥಿಗಳಲ್ಲಿ ಪಸರಿಸುವುದನ್ನು ತಡೆಗಟ್ಟುವ ಸಲುವಾಗಿ ತೆಗೆದು ಕೊಳ್ಳಬೇಕಾದ ಮುನ್ನೆಚ್ಚರಿಕೆಯ ಕ್ರಮಗಳ ಬಗ್ಗೆ ಉಲ್ಲೇಖ (3)ರ ಈ ಕಛೇರಿಯ ಸುತ್ತೋಲೆಯಲ್ಲಿ ಈಗಾಗಲೇ ಸೂಚನೆಗಳನ್ನು ನೀಡಲಾಗಿದೆ.

ಮುನ್ನೆಚ್ಚರಿಕೆಯ ಕ್ರಮವಾಗಿ ಈಗಾಗಲೇ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸೂಚನೆಯ ಮೇರೆಗೆ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ, ಎಲ್.ಕೆ.ಜಿ ಮತ್ತು ಯು.ಕೆ.ಜಿ ಶಾಲಾ ವಿದ್ಯಾರ್ಥಿಗಳಿಗೆ ದಿನಾಂಕ 09.03.2020 ರಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಜೆಯನ್ನು ಘೋಷಿಸಲಾಗಿದೆ.

ಮುಂದುವರೆದು, ದಿನಾಂಕ 09.03.2020 ರಂದು ಉಲ್ಲೇಖ (4) ರಂತೆ ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭೆಯಲ್ಲಿ ರಾಜ್ಯದಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು Coronavirus ನಿಂದ ಉಂಟಾಗಬಹುದಾದ ಅಪಾಯದಿಂದ ಸಂರಕ್ಷಿಸುವ ನಿಟ್ಟಿನಲ್ಲಿ ಹಾಗೂ ಪರೀಕ್ಷಾ ದಿನಗಳು ಸಮೀಪಿಸುತ್ತಿರುವುದರಿಂದ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ ಚರ್ಚಿಸಿದ್ದು, ಅದರಂತೆ ರಾಜ್ಯಾದ್ಯಂತ ಎಲ್ಲಾ ಶಾಲಾ ವಿದ್ಯಾರ್ಥಿಗಳಿಗೆ ಆದಷ್ಟು ಬೇಗನೆ ವಾರ್ಷಿಕ ಪರೀಕ್ಷೆಗಳನ್ನು ನಡೆಸಿ ಬೇಸಿಗೆ ರಜೆಯನ್ನು ಘೋಷಿಸಲು ಕ್ರಮ ವಹಿಸುವಂತೆ ಸಲಹೆ ನೀಡಿರುತ್ತಾರೆ.

ಈ ಹಿನ್ನೆಲೆಯಲ್ಲಿ ದಿನಾಂಕ 09.03.2020 ರಂದು ನಡೆದ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳೊಂದಿಗೆ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಚರ್ಚಿಸಿದಂತೆ 2019-20ನೇ ಸಾಲಿನ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಗಳನ್ನು ಈ ಕೆಳಕಂಡ ಕಾಲಮಿತಿಯೊಳಗೆ ನಡೆಸಿ ಪೂರ್ಣಗೊಳಿಸಲು ಸೂಚಿಸಿದೆ.

| **ತರಗತಿ** | **ಪರೀಕ್ಷೆಯನ್ನು ಪೂರ್ಣಗೊಳಿಸಬೇಕಾದ ದಿನಾಂಕ** |
|---|---|
| 1 ರಿಂದ 5ನೇ ತರಗತಿಯ ವಿದ್ಯಾರ್ಥಿಗಳಿಗೆ | ದಿನಾಂಕ 11.03.2020 ರಿಂದ 16.03.2020 ರವರೆಗೆ. |
| 6 ರಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ | ದಿನಾಂಕ 23.03.2020ರೊಳಗೆ ಪೂರ್ಣಗೊಳಿಸುವುದು. |
| 10ನೇ ತರಗತಿಯ ವಿದ್ಯಾರ್ಥಿಗಳಿಗೆ | ಈಗಾಗಲೇ ನಿಗದಿಯಾಗಿರುವ ವೇಳಾಪಟ್ಟಿಯಂತೆ |

ಈ ಮೇಲ್ಕಂಡ ವೇಳಾಪಟ್ಟಿಯಂತೆ ವಾರ್ಷಿಕ ಪರೀಕ್ಷೆಯನ್ನು ನಡೆಸಿ ವಿದ್ಯಾರ್ಥಿಗಳಿಗೆ ರಜೆಯನ್ನು ಘೋಷಿಸಲು ಅಗತ್ಯ ಕ್ರಮ ವಹಿಸುವುದು. ಹಾಗೂ ದಿನಾಂಕ 27.02.2020 ರಂದು ಹೊರಡಿಸಿರುವ ಈ ಕಛೇರಿಯ ಸುತ್ತೋಲೆಯಲ್ಲಿನ ಎಲ್ಲಾ ಅಂಶಗಳನ್ನು ಯಥಾವತ್ತಾಗಿ ಪಾಲಿಸುವುದು.

ಉಳಿದಂತೆ, ಶಾಲೆ ನಡೆಯುವ ದಿನಾಂಕಗಳಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಕಾರದೊಂದಿಗೆ ವಿದ್ಯಾರ್ಥಿಗಳು ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆಯ ಕ್ರಮಗಳ ಕುರಿತು ಪ್ರತಿದಿನ ಪ್ರಾರ್ಥನಾ ಸಮಯದಲ್ಲಿ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದು.

ಒಂದು ವೇಳೆ ಯಾವುದೇ ವಿದ್ಯಾರ್ಥಿ ಜ್ವರ, ಕೆಮ್ಮು, ನಗಡಿ ಅಥವಾ ಇತರೆ ಯಾವುದೇ ಸಮಸ್ಯೆಯಿಂದ ಬಳಲುತ್ತಿರುವುದು ಕಂಡು ಬಂದಲ್ಲಿ ಅಂತಹ ವಿದ್ಯಾರ್ಥಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ತಕ್ಷಣವೇ ಸೂಕ್ತ ಚಿಕಿತ್ಸೆ ನೀಡಿ ಕಡ್ಡಾಯವಾಗಿ ರಜೆಯನ್ನು ನೀಡುವುದು.

ವಿದ್ಯಾರ್ಥಿಗಳು ಸುರಕ್ಷತಾ ಕ್ರಮವಾಗಿ ಮಾಸ್ಕ್ (mask) ಧರಿಸಿ ಪರೀಕ್ಷೆಯನ್ನು ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಅನುಮತಿಯನ್ನು ನೀಡುವುದು.

9/3/20

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3) ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ ಕಳುಹಿಸುತ್ತಾ ಅತೀ ತುರ್ತು ಕ್ರಮ ಮತ್ತು ಅನುಷ್ಠಾನಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.